ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

842 (842) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಭಾಷಾ ಅಲ್ಪಸಂಖ್ಯಾತ / ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಕುರಿತ ವ್ಯಾಖ್ಯಾನವೇನು; ಧಾರ್ಮಿಕ ಅಲ್ಪಸಂಖ್ಯಾತ/ ಭಾಷಾ ಅಲ್ಪ ಸಂಖ್ಯಾತ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರ ನೀಡುತ್ತಿರುವ ರಿಯಾಯಿತಿಗಳೇನು; ಈ ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರದ ರೀತಿಯಲ್ಲಿ ನಡೆಸುತ್ತಿರುವುದು; ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಭಾಷಾ ಅಲ್ಪಸಂಖ್ಯಾತರ / ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ ಆಯಾಯ ಭಾಷೆಯ / ಧರ್ಮದ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ 50% ಇದ್ದರೆ ಮಾತ್ರ ಅಂತಹ ಶಿಕ್ಷಣ ಸಂಸ್ಥೆಗಳನ್ನು ಭಾಷಾ / ಧಾರ್ಮಿಕ ಅಲ್ಪಸಂಖ್ಯಾತ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಎಂದು ಪರಿಗಣಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಬಾಷಾ ಅಲ್ಪಸಂಖ್ಯಾತ/ ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಸರ್ಕಾರಕ್ಕೆ ಎಷ್ಟು ವೈದ್ಯಕೀಯ ಸೀಟುಗಳನ್ನು ಬಿಟ್ಟುಕೊಡುತ್ತಿವೆ; (ಕಾಲೇಜುವಾರು ಮಾಹಿತಿ ನೀಡುವುದು)

(ಈ) ಬಡ ಮತ್ತು ಪ್ರತಿಭಾವಂತ ಮಕ್ಕಳು ವೈದ್ಯಕೀಯ ಶಿಕ್ಷಣ ಪಡೆಯಲು ಅನುವಾಗುವಂತೆ ಸರ್ಕಾರಕ್ಕೆ ವೈದ್ಯಕೀಯ ಮತ್ತು ಉನ್ನತ ವೈದ್ಯಕೀಯ ಶಿಕ್ಷಣದ ಸೀಟುಗಳನ್ನು ಬಿಟ್ಟುಕೊಡದಿರುವ ಶಿಕ್ಷಣ ಸಂಸ್ಥೆಗಳ ಮಾನ್ಯತೆಯನ್ನು ರದ್ದು ಪಡಿಸುವಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಈ ಕುರಿತು ಸರ್ಕಾರದ ನಿಲುವೇನು?